(56)

# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/256/15-16

ದಿನಾಂಕ : 08-07-2016

ಉಪಸ್ಥಿತರು: **ಶ್ರೀ ಲೋಕೇಶ್ ಪಿ.ಎನ್** (ಕ.ಆ.ಸೇ)

**ಸಹಾಯಕ ಆಯುಕ್ತರು, ಬಳ್ಳಾರಿ.**

| ವಾದಿಗಳು | ಪ್ರತಿವಾದಿಗಳು |
|---|---|
| 1.ಶ್ರೀಮತಿ ಕುಸುಮಾ ಕುಮಾರಿ ಗಂಡ ಜಿ.ಬಿ.ಪ್ರಸಾದ್,<br>ಸಾ|| 9/ಡಿ, ವಾರ್ಡ ನಂ.1, ರೈಲ್ವೆ ಕ್ವಟ್ರಸ್, ಬಳ್ಳಾರಿ<br><br>**(ಶ್ರೀ ಬಿ.ಎಂ.ಸುರೇಶ, ವಕೀಲರು, ಬಳ್ಳಾರಿ)** | 1. ತಹಶೀಲ್ದಾರರು, ಬಳ್ಳಾರಿ<br>2. ಕಂದಾಯ ನೀರಿಕ್ಷಕರು, ಬಳ್ಳಾರಿ<br>3. ಗ್ರಾಮಲೆಕ್ಕಾಧಿಕಾರಿಗಳು, ಕೋಳಗಲ್ಲು ಗ್ರಾಮ, |

**ದಾವಾ ಜಮೀನಿನ ವಿವರ :-**

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಬಳ್ಳಾರಿ | ಕೊಳಗಲ್ಲು | 652A/1 ಪೈಕಿ | 00.02.75 (0.02.3/4) |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನೀರಿಕ್ಷಕರು, ಬಳ್ಳಾರಿ ಇವರ ಎಂ.ಆರ್.ನಂ.919/1997-98 ದಿನಾಂಕ:14-10-1998ರ ಆದೇಶದ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ಸಲ್ಲಿಸುವಲ್ಲಿ ಆದ ವಿಳಂಬಕ್ಕೆ ಕಾಲಮಿತಿ ಕಾಯ್ದೆಯಡಿ ವಿಳಂಬ ಮನ್ನಾಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ವಿಳಂಬ ಮನ್ನಾ ಮಾಡಿ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಟಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 08-07-2016 ಗಳಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಅವರ ವಕೀಲರು ಮುಖಾಂತರ ದಿನಾಂಕ: 08/07/2016 ರಂದು ಈ ನ್ಯಾಯಾಲಯಕ್ಕೆ ಹಾಜರಾಗಿರುತ್ತಾರೆ , ಬಳ್ಳಾರಿ ತಾಲ್ಲೂಕಿನ ಕೊಳಗಲ್ಲು ಗ್ರಾಮದ ಸ.ನಂ 652A/1 ಪೈಕಿ ವಿಸ್ತೀರ್ಣ: 00.02.3/4 ಎಕರೆ ಜಮೀನನ್ನು ಗೋಡವರ್ತಿ ವೆಂಕಟ ಕೃಷ್ಣಮೂರ್ತಿ ಇವರ ಜಿ.ಪಿ.ಎ ಹೋಲ್ಡರ್ ಶಿದ್ದನಗೌಡ ಇಂದಿರನಗರ ಬಳ್ಳಾರಿ ಇವರಿಂದ ನೊಂದಾಯಿತ ಕ್ರಯ ಪತ್ರ ಸಂಖ್ಯೆ 5490/97-98 ದಿನಾಂಕ 06-02-1998 ರಲ್ಲಿ ಸದರಿ ಜಮೀನನ್ನು ಪಡೆದಿರುತ್ತಾರೆ. ಮುಂದುವರೆದು ಸದರಿ ಜಮೀನಿನ ಹಕ್ಕು ಬದಲಾವಣೆ ಕೋರಿ ಅರ್ಜಿ ಸಲ್ಲಿಸಲಾಗಿ ಕಂದಾಯ ನಿರೀಕ್ಷಕರು ಬಳ್ಳಾರಿ ಇವರು ವ್ಯವಸಾಯ ಜಮೀನನ್ನು ವ್ಯವಸಾಯೇತರ ಜಮೀನಾಗಿ ಪರಿವರ್ತಿಸದೆ ಮನೆಯ ಪ್ಲಾಟ್ ಮಾಡಿ ಮಾರಾಟ ಮಾಡಿರುತ್ತಾರೆಂದು ಸದರಿ ಹಕ್ಕು ಬದಲಾವಣೆಯನ್ನು ಗೈರು ಮಂಜೂರು ಮಾಡಿರುತ್ತಾರೆ.

ಮೇಲ್ಮನವಿ ದಾರರು ಕಂದಾಯ ನಿರೀಕ್ಷಕರ ಎಂ.ಆರ್.ನಂ.919/1997-98 ಆದೇಶದ ವಿರುದ್ದ ಮೇಲ್ಮನವಿ ಸಲ್ಲಿಸುತ್ತಾ, ಕ್ರಯ ಪತ್ರದಂತೆ ಹಕ್ಕುಬದಲಾವಣೆ ಮಾಡಿ ಕಂದಾಯ ದಾಖಲೆ (ಪಹಣಿ) ಯಲ್ಲಿಹೆಸರನ್ನು ನಮೂದಿಸುವಂತೆ ಕೋರಿರುತ್ತಾರೆ. ಆದರೆ ಮೇಲ್ಮನವಿಯನ್ನು ಪರಿಶೀಲಿಸಲಾಗಿ ವಿವಾದಾಸ್ಪದ ಜಮೀನನ್ನು ಭೂ ಪರಿವರ್ತನೆಯಾಗಿರುವುದಿಲ್ಲ, ತುಂಡುಭೂಮಿಯನ್ನು ಖರೀದಿಸಿರುವುದು ಕಂಡುಬಂದಿರುತ್ತದೆ ಕಾರಣ ಈ ಕೆಳಕಂಡ ಆದೇಶ.

ಮುಂದಿನ ಪುಟಕ್ಕೆ...